**Akashvani : Bangalore**
**Regional Bulletin In Kannada**
**21.03.2026 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**21.03.2026 / 18.40 hrs**

**<><*<><>*><>**

<u>ಮುಖ್ಯಾಂಶಗಳು</u>

೧. ನ್ಯಾಯಾಂಗ ವ್ಯವಸ್ಥೆ ಸದೃಢಗೊಳಿಸುವ ರೀತಿಯಲ್ಲಿ ಕೃತಕಬುದ್ಧಿಮತ್ತೆ ಅಳವಡಿಕೆಗೆ ಭಾರತದ ವರಿಷ್ಠ ನ್ಯಾಯಾಧೀಶ ನ್ಯಾಯಮೂರ್ತಿ ಸೂರ್ಯಕಾಂತ್ ಪ್ರತಿಪಾದನೆ

೨. ದೇಶಕ್ಕೆ ಶೀಘ್ರದಲ್ಲೇ ಇಂಧನ ಅನಿಲದ ಇನ್ನೂ ಎರಡು ಹಡಗುಗಳ ಆಗಮನ ; ಆತಂಕ ಅಗತ್ಯವಿಲ್ಲ - ಸಚಿವ ವಿ.ಸೋಮಣ್ಣ

೩. ಬೆಂಗಳೂರು ನೀರಿನ ಗ್ರಾಹಕರಿಗೆ ಜಲಮಂಡಳಿಯಿಂದ ಒನ್ ಟೈಮ್ ಸೆಟಲ್ಮೆಂಟ್ ಯೋಜನೆ ಪ್ರಕಟ

೪. ತುಮಕೂರಿನಲ್ಲಿ ಮೇ ೪ ರಿಂದ ೧೦ರವರೆಗೆ ಐಟಿಎಫ್ ಮಹಿಳಾ ವಿಶ್ವ ಟೆನಿಸ್ ಡಬ್ಲ್ಯು-೩೫ ಟೂರ್ನಮೆಂಟ್

**<><*<><>*><>**

ನ್ಯಾಯಾಂಗ ವ್ಯವಸ್ಥೆಗೆ ಎಐ ತಾಂತ್ರಿಕತೆಯನ್ನು ಸಂಯೋಜನೆಗೊಳಿಸುವಾಗ ಅದು ವ್ಯವಸ್ಥೆಯನ್ನು ಮತ್ತಷ್ಟು ಸದೃಢಗೊಳಿಸುವ ರೀತಿಯಲ್ಲಿ ಇರಬೇಕೆಂದು ಭಾರತದ ವರಿಷ್ಠ ನ್ಯಾಯಾಧೀಶ ನ್ಯಾಯಮೂರ್ತಿ ಸೂರ್ಯಕಾಂತ್ ಪ್ರತಿಪಾದಿಸಿದ್ದಾರೆ. ಬೆಂಗಳೂರಿನಲ್ಲಿಂದು ಕರ್ನಾಟಕ ನ್ಯಾಯಾಂಗ ಅಕಾಡೆಮಿಯ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ, ಕೃತಕ ಬುದ್ಧಿಮತ್ತೆ-ಎಐ-ವ್ಯಾಜ್ಯಗಳ ತಡೆಗಟ್ಟುವಿಕೆ ಮತ್ತು ಇತ್ಯರ್ಥ' ಕುರಿತ ಒಂದು ದಿನದ ವಿಚಾರ ಸಂಕಿರಣವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಅಗಾಧ ಪ್ರಮಾಣದ ದತ್ತಾಂಶ-ದಾಖಲಾತಿಗಳನ್ನು ನಿರ್ವಹಿಸಲು, ಮಾದರಿಗಳನ್ನು ಗುರುತಿಸಲು, ಪ್ರಕ್ರಿಯೆಗಳ ವಿಳಂಬವನ್ನು ತಗ್ಗಿಸಲು ಎಐ ಸಹಾಯಕವಾಗಬೇಕು. ಆದರೆ, ಪ್ರಧಾನ ಕಾರ್ಯವಾದ ತೀರ್ಪು ಪ್ರಕಟಿಸುವಿಕೆಯನ್ನೇ ಅದು ಅತಿಕ್ರಮಿಸುವಂತಾಗಬಾರದು ಎಂದು ಅವರು ತಿಳಿಸಿದರು. ತೀರ್ಪು ಪ್ರಕಟಿಸುವಿಕೆಯ ಹಂತದ ಮೇಲೆ ಎಐ ಸಾಧನಗಳಿಗೆ ಹಿಡಿತ ಸಾಧಿಸಲು ಆಸ್ಪದ ಮಾಡಿಕೊಟ್ಟರೆ ಪಾರದರ್ಶಕವಲ್ಲದ ಹಾಗೂ ಉತ್ತರದಾಯಿಯಲ್ಲದ ವ್ಯವಸ್ಥೆ ನಿರ್ಮಾಣವಾಗಲು ಅವಕಾಶ ಮಾಡಿಕೊಟ್ಟಂತಾಗುತ್ತದೆ,ನ್ಯಾಯಾಂಗ ವ್ಯವಸ್ಥೆಯಲ್ಲಿ ಎಐ ತರುವ ಪ್ರಯೋಜನಗಳು ಮಾರ್ಗಗಳಾಗಿ ಮಾತ್ರವೇ ಬಳಕೆಯಾಗಬೇಕು. ಆದರೆ, ಯಾವ ದಿಕ್ಕಿನತ್ತ ಸಾಗಬೇಕು ಎಂಬ ದಿಕ್ಸೂಚಿಯ ಪಾತ್ರವನ್ನು ಮನುಷ್ಯನ ಬುದ್ಧಿಯೇ ನಿರ್ಧರಿಸಬೇಕು ಎಂದು ಅವರು ಅಭಿಪ್ರಾಯಪಟ್ಟರು.ಕರ್ನಾಟಕ ಹೈಕೋರ್ಟ್ ಮುಖ್ಯ ನ್ಯಾಯಧೀಶ ನ್ಯಾಯಮೂರ್ತಿ ವಿಭು ಬಖ್ರು ಅವರು ಮಾತನಾಡಿ, ಎಐ ತಾಂತ್ರಿಕತೆಯಿಂದ ಕೆಲವು ಕ್ರಾಂತಿಕಾರಿ ಪ್ರಯೋಜನಗಳು ಕೂಡ ಆಗುತ್ತಿವೆ. ಮಾದರಿಗಳ ವಿಶ್ಲೇಷಣೆಯನ್ನು ಸಾಧ್ಯವಾಗಿಸುವ ಮೂಲಕ ಭವಿಷ್ಯದಲ್ಲಿ ತಲೆದೋರಬಹುದಾದ

ವ್ಯಾಜ್ಯಗಳನ್ನು ಎಐ ನೆರವಿನಿಂದ ಮುಂಚಿತವಾಗಿಯೇ ಊಹಿಸುವುದು ಸಾಧ್ಯವಾಗಿದೆ. ಇದರಿಂದ ನ್ಯಾಯಾಂಗ ವ್ಯವಸ್ಥೆಯ ದಕ್ಷತೆ ಹೆಚ್ಚಲಿದೆ. ಎಐ ಬೆಂಬಲಿತ ಆನ್‌ಲೈನ್ ಡಿಸ್ಪ್ಯೂಟ್ ರೆಸಲ್ಯೂಷನ್ ವೇದಿಕೆಯಿಂದಾಗಿ ಕಡಿಮೆ ಖರ್ಚಿನಲ್ಲಿ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥಗೊಳಿಸಲು ಅನುಕೂಲವಾಗಲಿದೆ. ರಾಜಿ ಸಂಧಾನಗಳ ಮೂಲಕ ವ್ಯಾಜ್ಯಗಳನ್ನು ಇತ್ಯರ್ಥಗೊಳಿಸುವುದಕ್ಕೂ ಇದು ಸಹಾಯಕವಾಗಲಿದೆ ಎಂದು ಅವರು ಹೇಳಿದರು. ಭಾರತದ ನಿವೃತ್ತ ಮುಖ್ಯ ನ್ಯಾಯಾಧೀಶ ನ್ಯಾಯಮೂರ್ತಿ ಎಂ.ಎನ್.ವೆಂಕಟಾಚಲಯ್ಯ ಹಾಗೂ ಅಂತಾರಾಷ್ಟ್ರೀಯ ನ್ಯಾಯವಾದಿಗಳ ಸಂಘದ ಅಧ್ಯಕ್ಷ ಕೆ.ಕೆ. ವೇಣುಗೋಪಲ್ ಅವರ ಸಂದೇಶಗಳನ್ನು ಕಾರ್ಯಕ್ರಮದಲ್ಲಿ ವಿಡಿಯೊ ಮೂಲಕ ಬಿತ್ತರಿಸಲಾಯಿತು. ಈ ಸಂದರ್ಭದಲ್ಲಿ ಸುಪ್ರಿಂ ಕೋರ್ಟ್‌ನ ವಿಶ್ರಾಂತ ನ್ಯಾಯಧೀಶ ನ್ಯಾಯಮೂರ್ತಿ ಸಂತೋಷ್ ಹೆಗ್ಡೆ, ಕರ್ನಾಟಕದ ಅಡ್ವೊಕೇಟ್ ಜನರಲ್ ಕೆ. ಶಶಿಕಿರಣ ಶೆಟ್ಟಿ, ಅಂತಾರಾಷ್ಟ್ರೀಯ ನ್ಯಾಯವಾದಿಗಳ ಸಂಘದ ಭಾರತ ಘಟಕದ ಅಧ್ಯಕ್ಷ ಎ.ಕೆ. ಗಂಗೂಲಿ, ಪ್ರಧಾನ ಕಾರ್ಯದರ್ಶಿ ಮಮತಾ ತಿವಾರಿ ಹಿರಿಯ ವಕೀಲ ಕೃಷ್ಣನ್ ವೇಣುಗೋಪಾಲ್, ಹಿರಿಯ ವಕೀಲರು ಹಾಗೂ ಕಾನೂನು ವಿದ್ಯಾರ್ಥಿಗಳು ಭಾಗವಹಿಸಿದ್ದರು. ಅಂತಾರಾಷ್ಟ್ರೀಯ ನ್ಯಾಯವಾದಿಗಳ ಸಂಘದ ಭಾರತದ ಘಟಕ, ಬಾರ್ ಅಸೋಸಿಯೇಷನ್ ಆಫ್ ಇಂಡಿಯಾ, ಕರ್ನಾಟಕ ನ್ಯಾಯಾಂಗ ಅಕಾಡೆಮಿ ಮತ್ತು ನ್ಯಾಷನಲ್ ಲಾ ಸ್ಕೂಲ್ ಆಫ್ ಇಂಡಿಯಾ ವಿಶ್ವವಿದ್ಯಾಲಯದ ಸಹಯೋಗದೊಂದಿಗೆ ಈ ವಿಚಾರ ಸಂಕಿರಣವನ್ನು ಏರ್ಪಡಿಸಲಾಗಿತ್ತು.

**<><*<><>*><>**

ದೇಶಕ್ಕೆ ಇನ್ನೆರಡು ದಿನಗಳಲ್ಲಿ ಇನ್ನೂ ೨ ಹಡಗುಗಳಲ್ಲಿ ಅನಿಲ ಬರುತ್ತಿದೆ. ಜನತೆ ಯಾವುದೇ ರೀತಿಯ ಆತಂಕ ಪಡುವ ಅಗತ್ಯವಿಲ್ಲ ಎಂದು ಕೇಂದ್ರ ಜಲಶಕ್ತಿ ಹಾಗೂ ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಹೇಳಿದ್ದಾರೆ. ಅವರು ತುಮಕೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿ, ರಾಜ್ಯದಲ್ಲಿ ಗೃಹ ಬಳಕೆ ಗ್ಯಾಸ್ ಸಿಲಿಂಡರ್‌ಗಳ ಸಮಸ್ಯೆ ಉಂಟಾಗದಂತೆ ಈಗಾಗಲೇ ಆಹಾರ ಸಚಿವರು ಗ್ಯಾಸ್ ವಿತರಕರಿಗೆ ಸೂಚನೆ ನೀಡಿದ್ದಾರೆ. ಅಲ್ಲದೆ ಅಧಿಕಾರಿಗಳು ಸಹ ಜನಸಾಮಾನ್ಯರ ನೋವನ್ನು ಅರ್ಥ ಮಾಡಿಕೊಂಡು ಕೆಲಸ ಮಾಡಬೇಕು ಎಂದು ಹೇಳಿದರು. ಪ್ರಧಾನಿ ನರೇಂದ್ರ ಮೋದಿಯವರು ಮದ್ಯಪ್ರಾಚ್ಯ ದೇಶಗಳ ಸಂಘರ್ಷದಿಂದ ದೇಶವನ್ನು ಯಾವ ರೀತಿ ಸಂರಕ್ಷಣೆ ಮಾಡಬೇಕು ಎಂಬ ದೂರದೃಷ್ಟಿಯನ್ನು ಹೊಂದಿದ್ದಾರೆ ಮುಂದಿನ ೩-೪ ದಿನಗಳಲ್ಲಿ ಯುದ್ಧದ ವಾತಾವರಣ ತಿಳಿಯಾಗುವ ಸಾಧ್ಯತೆ ಇದೆ ಎಂಬ ಮಾತುಗಳು ಕೇಳಿ ಬರುತ್ತಿದೆ ಎಂದು ಅವರು ತಿಳಿಸಿದರು. ರಾಜ್ಯದಲ್ಲಿ ನಡೆಯಲಿರುವ ಎರಡು ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆ ಯಲ್ಲಿ ಭಾರತೀಯ ಜನತಾ ಪಾರ್ಟಿ ನಿರಾಯಾಸವಾಗಿ ಗೆಲುವು ಸಾಧಿಸಲಿದೆ ಈ ಸಂದರ್ಭದಲ್ಲಿ ಅವರು ವಿಶ್ವಾಸ ವ್ಯಕ್ತಪಡಿಸಿದರು.

**<><*<><>*><>**

ಬೆಂಗಳೂರಿನಲ್ಲಿ ದೀರ್ಘಕಾಲದಿಂದ ನೀರಿನ ಬಿಲ್ ಪಾವತಿ ಬಾಕಿ ಉಳಿಸಿಕೊಂಡಿರುವ ಗ್ರಾಹಕರಿಗೆ ಅನುಕೂಲ ಕಲ್ಪಿಸಲು, ಜಲಮಂಡಳಿಯಿಂದ ಒನ್ ಟೈಮ್ ಸೆಟಲ್‌ಮೆಂಟ್ ಯೋಜನೆಯನ್ನು ಏಪ್ರಿಲ್ ತಿಂಗಳಿನಿಂದ ಜಾರಿಗೊಳಿಸಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಈ ಬಗ್ಗೆ ಮಾಧ್ಯಮ ಪ್ರಕಟಣೆ ನೀಡಿರುವ ಅವರು, ಬೆಂಗಳೂರು ನಗರದ ಜನರಿಗೆ ಅನುಕೂಲ ಮಾಡಿಕೊಡಲು, ಬಾಕಿ ಉಳಿಸಿಕೊಂಡಿರುವ ಬಿಲ್ ಮೊತ್ತದಲ್ಲಿ ಅಸಲು ಪಾವತಿಸಿದಲ್ಲಿ ಬಡ್ಡಿಯನ್ನು ಮನ್ನಾ ಮಾಡಲಾಗುವುದು ಎಂದು ಹೇಳಿದ್ದಾರೆ. ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ವ್ಯಾಪ್ತಿಯಲ್ಲಿರುವ ಸುಮಾರು ೧೧ ಲಕ್ಷ ನೀರಿನ ಸಂಪರ್ಕಗಳ ಪೈಕಿ, ೫ ಲಕ್ಷ ೧೧ ಸಾವಿರ

ಗ್ರಾಹಕರು ಬಿಲ್ ಬಾಕಿ ಉಳಿಸಿಕೊಂಡಿದ್ದಾರೆ. ಈ ವರ್ಷದ ಫೆಬ್ರವರಿ ಅಂತ್ಯದ ಮಾಹಿತಿಯಂತೆ, ಒಟ್ಟು ಬಾಕಿ ಮೊತ್ತ ೮೫೧ ಕೋಟಿ ೩೩ ಲಕ್ಷ ರೂಪಾಯಿಗಳಾಗಿದ್ದು, ಇದರಲ್ಲಿ ಅಸಲು ಮೊತ್ತ ೫೩೯ ಕೋಟಿ ೪೩ ಲಕ್ಷ ಹಾಗೂ ಬಡ್ಡಿ ೩೧೧ ಕೋಟಿ ೯೦ ಲಕ್ಷ ರೂಪಾಯಿ ಸೇರಿದೆ. ಈ ೩ ತಿಂಗಳ ಯೋಜನೆ ಅವಧಿಯಲ್ಲಿ ಗ್ರಾಹಕರು ತಮ್ಮ ಅಸಲು ಮೊತ್ತವನ್ನು ಸಂಪೂರ್ಣವಾಗಿ ಪಾವತಿಸಿದರೆ, ಏಪ್ರಿಲ್‌ವರೆಗೆ ಸಂಗ್ರಹವಾಗಿರುವ ಸಂಪೂರ್ಣ ಬಡ್ಡಿಯನ್ನು ಶೇಕಡ ೧೦೦ರಷ್ಟು ವಿನಾಯಿತಿ ರೂಪದಲ್ಲಿ ಮನ್ನಾ ಮಾಡಲಾಗುತ್ತದೆ. ಈ ಯೋಜನೆಯು ಗೃಹ ವಾಣಿಜ್ಯ ಕೈಗಾರಿಕಾ ಸೇರಿದಂತೆ ಎಲ್ಲ ವರ್ಗದ ಗ್ರಾಹಕರಿಗೂ ಅನ್ವಯವಾಗಲಿದೆ. ಸರ್ಕಾರಿ ಇಲಾಖೆಗಳು ಮತ್ತು ಸಂಸ್ಥೆಗಳ ಬಾಕಿಗಳಿಗೂ ಲೆಕ್ಕಪತ್ರ ಸಮನ್ವಯದ ಮೂಲಕ ವ್ಯವಸ್ಥೆ ಕಲ್ಪಿಸಲಾಗುತ್ತದೆ. ಗ್ರಾಹಕರು ಕಿಯೋಸ್ಕ್, ಆನ್‌ಲೈನ್ ಪೋರ್ಟಲ್ ಹಾಗೂ ವಿವಿಧ ಡಿಜಿಟಲ್ ಪಾವತಿ ವಿಧಾನಗಳ ಮೂಲಕ ಸುಲಭವಾಗಿ ಹಣ ಪಾವತಿಸಬಹುದಾಗಿದೆ. ಸಾರ್ವಜನಿಕರು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮನವಿ ಮಾಡಿದ್ದಾರೆ.

**<><*<><>*><>**

ಬೆಂಗಳೂರಿನ ಸದಾಶಿವನಗರದ ತ್ರಿಕೋನ ಉದ್ಯಾನದಲ್ಲಿ ನಿರ್ಮಿಸಲಾಗಿರುವ ಡಾ.ಪುನೀತ್ ರಾಜ್‌ಕುಮಾರ್ ಅವರ ೧೦ ಅಡಿ ಎತ್ತರದ ಪುತ್ಥಳಿಯನ್ನು ಅಶ್ವಿನಿ ಪುನೀತ್ ರಾಜ್‌ಕುಮಾರ್ ಇಂದು ಅನಾವರಣಗೊಳಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಮಲ್ಲೇಶ್ವರ ಶಾಸಕ ಡಾ.ಸಿ.ಎನ್.ಅಶ್ವತ್ಥ ನಾರಾಯಣ, ಅಪ್ಪು ನಾಡಿನ ಜನರ ಹೃದಯಗಳಲ್ಲಿ ಅಮರವಾಗಿದ್ದು, ಅವರ ಆದರ್ಶಗಳು ಜೀವನಕ್ಕೆ ಸದಾ ಪ್ರೇರಣೆಯಾಗಿರುತ್ತವೆ ಎಂದರು. ಚಲನಚಿತ್ರ ನಿರ್ದೇಶಕ ಡಾ.ರಾಜೇಂದ್ರ ಸಿಂಗ್ ಬಾಬು ಸೇರಿದಂತೆ ಹಲವು ಗಣ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

**<><*<><>*><>**

ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲೂಕಿನ ಬೊಮ್ಮಲಾಪುರ ಗ್ರಾಮದಲ್ಲಿ ಯುಗಾದಿ ದಿನದ ವರ್ಷದೊಡಕಿನ ಮಾರನೇ ದಿನವಾದ ಇಂದು ಸಾಂಪ್ರದಾಯಿಕ ಜಾನಪದ ಉತ್ಸವ ನಡೆಯಿತು. ಯುಗಾದಿ ವರ್ಷದೊಡಕಿನ ಸಂದರ್ಭದಲ್ಲಿ ಚಿಣ್ಣರು, ಹಿರಿಯರು, ಮಹಿಳೆಯರು ಸೇರಿದಂತೆ ವಿವಿಧ ವಯೋಮಾನದವರು ಬಣ್ಣ ಎರಚಾಟದಲ್ಲಿ ತೊಡಗುತ್ತಾರೆ. ಬಣ್ಣದ ಓಕುಳಿ ಜೊತೆಗೆ ಕಳೆದ ೩-೪ ದಶಕಗಳಿಂದ ಹುಲಿ, ಕರಡಿ, ಅಣಕು ಪಂಚಾಂಗ ಶ್ರವಣದ ವೇಷಧಾರಿಗಳು ಗಮನ ಸೆಳೆಯುತ್ತಾರೆ. ಅದರಂತೆ, ಬೊಮ್ಮಲಾಪುರದಲ್ಲಿ ಕರಡಿ ವೇಷಧಾರಿಗಳು ಮೈಗೆ ಕಪ್ಪು ಬಣ್ಣ ಬಳಿದುಕೊಂಡು ಎತ್ತಿಗೆ ಕಟ್ಟುವ ಗೆಜ್ಜೆಗಳನ್ನು ಕಟ್ಟಿಕೊಂಡು ನೃತ್ಯ ಮಾಡಿದರೆ ಹುಲಿ ವೇಷಧಾರಿಗಳು ಹಳದಿ-ಕಪ್ಪು ಬಣ್ಣಗಳ ಪಟ್ಟೆಗಳನ್ನು ಲೇಪಿಸಿಕೊಂಡು ವಿವಿಧ ಕಸರತ್ತುಗಳನ್ನು ಮಾಡಿ ಗಮನ ಸೆಳೆದರು.

**<><*<><>*><>**

ತುಮಕೂರಿನಲ್ಲಿ ಐಟಿಎಫ್ ಮಹಿಳಾ ವಿಶ್ವ ಟೆನಿಸ್ ಡಬ್ಲ್ಯು-೩೫ ಟೂರ್ನ್‌ಮೆಂಟ್ ಮೇ ೪ ರಿಂದ ೧೦ರವರೆಗೆ ನಡೆಯಲಿದೆ. ೩೦ ಸಾವಿರ ಅಮೆರಿಕನ್ ಡಾಲರ್ ಬಹುಮಾನ ಮೊತ್ತದ ಈ ಪಂದ್ಯಾವಳಿ ಜಾಗತಿಕ ಐಟಿಎಫ್ ಮಹಿಳಾ ಆವರ್ತದ ಭಾಗವಾಗಿದೆ. ಬೆಂಗಳೂರು ಮತ್ತು ಕಲಬುರಗಿಗಳಲ್ಲಿ ಇತ್ತೀಚೆಗೆ ಅಂತಾರಾಷ್ಟ್ರೀಯ ಪಂದ್ಯಾವಳಿಗಳು ಯಶಸ್ವಿಯಾಗಿ ನಡೆದಿರುವುದು ಹಾಗೂ ಈಗ ತುಮಕೂರಿನಲ್ಲಿ ನಡೆಯುವುದು ರಾಜ್ಯಕ್ಕೆ ಗೌರವ ತಂದುಕೊಟ್ಟಿದೆ. ಜಿಲ್ಲಾ ಉಸ್ತುವಾರಿ ಸಚಿವ

ಡಾ.ಜಿ.ಪರಮೇಶ್ವರ್ ಈ ಸಂದರ್ಭದಲ್ಲಿ ಮಾತನಾಡಿ, ಅಂತಾರಾಷ್ಟ್ರೀಯ ಪಂದ್ಯ ತುಮಕೂರಿನಲ್ಲಿ ನಡೆಯುವುದು ಹೆಮ್ಮೆಯ ವಿಷಯ ಎಂದಿದ್ದಾರೆ. ಕರ್ನಾಟಕ ರಾಜ್ಯ ಲಾನ್ ಟೆನಿಸ್ ಸಂಘದ ಉಪಾಧ್ಯಕ್ಷರು ಆಗಿರುವ ಸಚಿವ ಪ್ರಿಯಾಂಕ ಖರ್ಗೆ ರಾಜ್ಯದ ಪ್ರಮುಖ ನಗರಗಳನ್ನು ಮೀರಿ ಬೇರೆಡೆಗಳಲ್ಲಿ ವಿಶ್ವದರ್ಜೆಯ ಕ್ರೀಡಾ ಅವಕಾಶ ಕಲ್ಪಿಸುತ್ತಿರುವುದು ಸರ್ಕಾರದ ದೂರದೃಷ್ಟಿಯ ಸಂಕೇತವಾಗಿದೆ ಎಂದು ಹೇಳಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**